## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1294 |
| **ಸದಸ್ಯರ ಹೆಸರು** | : | **ಶ್ರೀ ಅ.ದೇವೇಗೌಡ (ಪದವೀಧರರ ಕ್ಷೇತ್ರ)** |
| **ಉತ್ತರಿಸ ಬೇಕಾದ ದಿನಾಂಕ** | : | 21.12.2018 |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಉಪ ಮುಖ್ಯಮಂತ್ರಿಯವರು** |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ವಾರ್ಡ್ ಸಂಖ್ಯೆ:42 ರಲ್ಲಿನ ಕಂಠೀರವ ಸ್ಟುಡಿಯೋದಿಂದ ಸೋನಾಲ್ ಗಾರ್ಮೆಂಟ್ ಕಡೆಗೆ ಹಾದು ಹೋಗುವ ರಸ್ತೆಯಲ್ಲಿನ ಸುಭಾಷ್‌ಚಂದ್ರ ವೃತ್ತದಲ್ಲಿ ನಿರ್ಮಾಣವಾಗುತ್ತಿರುವ ಅಂಡರ್‌ಪಾಸ್‌ನ ಕಾಮಗಾರಿಯು ಯಾವಾಗ ಪ್ರಾರಂಭವಾಯಿತು; | ಕಂಠೀರವ ಸ್ಟುಡಿಯೋ ಜಂಕ್ಷನ್‌ನಲ್ಲಿ ಗ್ರೇಡ್ ಸಪರೇಟರ್ ಕಾಮಗಾರಿಯನ್ನು ಗುತ್ತಿಗೆ ಮೂಲಕ ಕೈಗೊಳ್ಳಲು ದಿನಾಂಕ: 02.05.2012 ರಂದು ಕಾಮಗಾರಿ ಕಾರ್ಯದೇಶ ನೀಡಲಾಗಿರುತ್ತದೆ ಮತ್ತು ಈ ಕಾಮಗಾರಿಯನ್ನು ದಿನಾಂಕ:02-05-2012ರಂದೇ ಪ್ರಾರಂಭಿಸಲಾಗಿದೆ. |
| ಆ) | ಸದರಿ ಕಾಮಗಾರಿಯು ಅರ್ಧದಲ್ಲಿಯೇ ಅಪೂರ್ಣ ಸ್ಥಿತಿಯಲ್ಲಿದ್ದು, ವಾಹನ ಸಂಚಾರದ ದಟ್ಟಣೆಯಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸದರಿ ಕಾಮಗಾರಿಯ ಮೇಲು ಸೇತುವೆ ಪೂರ್ಣಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ. ಕೆಳ ಸೇತುವೆ ಕಾಮಗಾರಿ ಭೂಸ್ವಾಧೀನ ಪ್ರಕ್ರಿಯೆ ವಿಳಂಬದಿಂದಾಗಿ ಸ್ಥಗಿತಗೊಂಡಿದೆ. ಆದರೆ ಇದರಿಂದಾಗಿ ಸಂಚಾರಕ್ಕೆ ಅಡಚಣೆಯಾಗಿರುವುದಿಲ್ಲ. |
| ಇ) | ಈ ಕಾಮಗಾರಿಯ ಸ್ಥಗಿತಕ್ಕೆ ಕಾರಣವೇನು; ಕಾರಣರಾದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುವುದು ಮತ್ತು ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? | ಕೆಳ ಸೇತುವೆ ಕಾಮಗಾರಿಗೆ ಅವಶ್ಯವಾದ ಜಮೀನಿನ ಭೂಸ್ವಾಧೀನ ಪ್ರಕ್ರಿಯೆ ವಿಳಂಬದಿಂದ ಕಾಮಗಾರಿ ಸ್ಥಗಿತಗೊಂಡಿದೆ. ಪ್ರಸ್ತುತ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ಪರಿಸ್ಥಿತಿ ಉತ್ತಮವಾಗಿಲ್ಲದಿರುವುದರಿಂದ ಮತ್ತು ಈ ಕಾಮಗಾರಿಯು ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಬರುತ್ತಿರುವುದರಿಂದ ಕಾಮಗಾರಿಯನ್ನು ಬಿ.ಬಿ.ಎಂ.ಪಿ.ಗೆ ಹಸ್ತಾಂತರಿಸಲು ಪರಿಶೀಲಿಸಲಾಗುತ್ತಿದೆ. |

**ಸಂ: ನಅಇ 400 ಬೆಂಆಸೇ 2018.**

**(ಡಾ|| ಜಿ.ಪರಮೇಶ್ವರ)**
**ಉಪ ಮುಖ್ಯಮಂತ್ರಿ**